ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 29/3/21

# ಕೋವಿಡ್: ಸಿ.ಎಂ ಸಭೆ ಇಂದು

ಪ್ರಜಾವಾಣಿ ವಾರ್ತೆ 29-3-21

ಬೆಂಗಳೂರು: ರಾಜ್ಯದಲ್ಲಿ ಕೋವಿಡ್ ಸೋಂಕಿನ ಪ್ರಮಾಣ ಹೆಚ್ಚುತ್ತಿದ್ದು, ಅದನ್ನು ತಡೆಯುವ ಕುರಿತಂತೆ ಚರ್ಚಿಸಲು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಸಚಿವರು ಹಾಗೂ ವಲಯ ಉಸ್ತುವಾರಿಗಳ ಜೊತೆ ಸೋಮವಾರ ಚರ್ಚೆ ನಡೆಸಲಿದ್ದಾರೆ.

ಸಂಜೆ 5 ಗಂಟೆಗೆ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಈ ಸಭೆ ನಡೆಯಲಿದೆ. ಕೋವಿಡ್ ಸೋಂಕು ಹರಡದಂತೆ ನಿಯಂತ್ರಿಸಲು ಇನ್ನಷ್ಟು ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ಸಭೆಯಲ್ಲಿ ಸಮಾಲೋಚನೆ ನಡೆಯಲಿದೆ. ಸಚಿವರಿಂದ ಅಭಿಪ್ರಾಯ ಪಡೆದು, ಅದನ್ನು ಜಾರಿಗೊಳಿಸುವ ಬಗ್ಗೆ ಮುಖ್ಯಮಂತ್ರಿ ನಿರ್ಧರಿಸಲಿದ್ದಾರೆ.

ಈ ಕುರಿತು ಮಾತನಾಡಿದ ಆರೋಗ್ಯ ಸಚಿವ ಡಾ.ಕೆ. ಸುಧಾಕರ್, 'ಕೊರೊನಾ ಹೆಚ್ಚಳ ಆಗುತ್ತಿದೆ. ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ ಗೃಹ, ಕಂದಾಯ ಮತ್ತು ಶಿಕ್ಷಣ ಸಚಿವರು ಇರುತ್ತಾರೆ. ಮಹಾರಾಷ್ಟ್ರದಲ್ಲಿ ಲಾಕ್ ಡೌನ್, ಸೀಲ್ ಡೌನ್ ಗಮನಿಸಿದ್ದೇವೆ. ಈ ಎಲ್ಲ ವಿಚಾರಗಳ ಬಗ್ಗೆ ಚರ್ಚೆ ನಡೆಸುತ್ತೇವೆ' ಎಂದು ಹೇಳಿದರು.

'ಕೊರೊನಾ ನಿಯಂತ್ರಕ್ಕೆ ಈಗ ತೆಗೆದುಕೊಂಡಿರುವ ಕ್ರಮಗಳು ಸಾಕಾಗಲ್ಲ. ಗಡಿಭಾಗಗಳಲ್ಲಿ ಕಟ್ಟುನಿಟ್ಟಿನ ಕ್ರಮ, ಬೆಂಗಳೂರಿಗೆ ಬರುವವರ ಬಗ್ಗೆ ತೀವ್ರ ನಿಗಾ ಇಡಬೇಕಿದೆ. ಈ ಬಗ್ಗೆ ಗೃಹ ಸಚಿವರ ಜೊತೆ ಚರ್ಚೆ ನಡೆಸಿದ್ದೇನೆ. ಈ ಬಗ್ಗೆಯೂ ಸಭೆಯಲ್ಲಿ ಚರ್ಚಿಸಿ, ನಿರ್ಧಾರ ತೆಗೆದುಕೊಳ್ಳುತ್ತೇವೆ' ಎಂದರು.

'ಈ ಶೈಕ್ಷಣಿಕ ವರ್ಷದಿಂದ 1ರಿಂದ 9ನೇ ತರಗತಿವರೆಗೆ ಎಲ್ಲರನ್ನೂ ತೇರ್ಗಡೆ ಮಾಡಬೇಕೆಂದು ಸರ್ಕಾರ ಸೂಚಿಸಿದೆ. ಪರೀಕ್ಷೆ ಮಾಡದೆ ತೇರ್ಗಡೆ ಮಾಡುವುದರ ಬಗ್ಗೆ ಗೊತ್ತಿಲ್ಲ. ಶಿಕ್ಷಣ ಸಚಿವರ ಜೊತೆ ಚರ್ಚೆ ಮಾಡುತ್ತೇನೆ' ಎಂದು ಸುಧಾಕರ್ ತಿಳಿಸಿದರು.

## 2ನೇ ಅಲೆ: ಪರಿಸ್ಥಿತಿ ಹದಗೆಡುವ ಎಚ್ಚರಿಕೆ

ನವದೆಹಲಿ: ದೇಶದಲ್ಲಿ ಕೋವಿಡ್-19 ಎರಡನೇ ಅಲೆ ಬರುವ ದಿನಗಳಲ್ಲಿ ತೀವ್ರಗೊಂಡು ಪರಿಸ್ಥಿತಿ ಮತ್ತಷ್ಟು ಹದಗೆಡುವ ಸಾಧ್ಯತೆ ಇದೆ. ಸಾರ್ವಜನಿಕ ಹಾಗೂ ಖಾಸಗಿ ವಲಯದ ಆರೋಗ್ಯ ಸೇವೆಗಳನ್ನು ಇನ್ನಷ್ಟು ಸುಧಾರಿಸಬೇಕಾಗುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ.



ಕೋವಿಡ್ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಐಸಿಯುನಲ್ಲಿ ದಾಖಲಾಗುತ್ತಿರುವವರ ಸಂಖ್ಯೆಯೂ ಹೆಚ್ಚುತ್ತಿದ್ದು, ಈ ವಿದ್ಯಮಾನ ಎಷ್ಟು ದಿನಗಳವರೆಗೆ ಮುಂದುವರಿಯುವುದು ಎಂದು ಅಂದಾಜಿಸುವುದು ಕಷ್ಟ ಎಂದೂ ತಜ್ಞರು ಹೇಳಿದ್ದಾರೆ.

'ಐಸಿಯುನಲ್ಲಿ ದಾಖಲಿಸಿರುವ ಕೋವಿಡ್ ರೋಗಿಗಳ ಸ್ಥಿತಿ ತೀವ್ರವಾಗಿ ಹದಗೆಡುತ್ತಿದ್ದು, ಪ್ಲಾಸ್ಮಾ ಚಿಕಿತ್ಸೆಗೆ ದಿಢೀರ್ ಬೇಡಿಕೆ ಹೆಚ್ಚಾಗಿದೆ' ಎಂದು ನವದೆಹಲಿಯ ಜಾರ್ಜ್ ಇನ್‌ಸ್ಟಿಟ್ಯೂಟ್ ಫಾರ್ ಗ್ಲೋಬಲ್ ಹೆಲ್ತ್‌ನ ಹಿರಿಯ ಸಂಶೋಧಕ ಉಮ್ಮೆನ್ ಜಾನ್ ತಿಳಿಸಿದ್ದಾರೆ.

ಇನ್ನಷ್ಟು ಸುದ್ದಿಗಳು 8